ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಪಶ್ಚಿಮ ವಾಹಿನಿ ಯೋಜನೆಯ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

1291 (1443) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪಶ್ಚಿಮ ವಾಹಿನಿ ಯೋಜನೆಯನ್ವಯ ರಾಜ್ಯದಲ್ಲಿ ಅನುಷ್ಠಾನಗೊಂಡ ಕಾಮಗಾರಿಗಳಾವುವು; ಇದಕ್ಕಾಗಿ ಎಷ್ಟು ಅನುದಾನ ಒದಗಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಕರಾವಳಿ ಜಿಲ್ಲೆಗಳಲ್ಲಿ ನೀರಿನ ಗುಣಮಟ್ಟ ಏರಿಸಲು ಸರ್ಕಾರ ಕೈಗೊಂಡ ಯೋಜನೆಗಳಾವುವು; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಕಿಂಡಿ ಅಣೆಕಟ್ಟುಗಳಿವೆ; ಎಷ್ಟು ಕಿಂಡಿ ಅಣೆಕಟ್ಟುಗಳಿಗೆ ಹಲಗೆಗಳಿಲ್ಲದೆ ನೀರು ಸಂಗ್ರಹಿಸಲು ಆಗುತ್ತಿಲ್ಲ ಎಂಬ ದೂರುಗಳಿವೆ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಸಣ್ಣ ನೀರಾವರಿ ಯೋಜನೆ ಅನ್ವಯ 2019-20ರಲ್ಲಿ ಯೋಜನೆಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯು 2019-20ರಲ್ಲಿ ಕೈಗೊಂಡ ಕಾಮಗಾರಿಗಳೆಷ್ಟು? (ವಿವರ ನೀಡುವುದು)